**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ರಾಮನಗರ**
**ಘನ ನ್ಯಾಯಾಲಯದಲ್ಲಿ**
**ಪ್ರಕರಣ ಸಂಖ್ಯೆಃ ಎಸ್.ಸಿ.87/2022**

**ದಿನಾಂಕಃ 16.09.2025**
**(ಸಾಕ್ಷಿಗೆ ಪ್ರಮಾಣ ಮಾಡಿಸಲಾಯಿತು.)**

**ಪ್ರಾ.ಸಾಃ 10 (ಚಾ.ಸಾ.15)**

| | | |
|---|---|---|
| **ಹೆಸರು** | ಃ | **ವನಜಾಕ್ಷಿ** |
| **ಗಂಡನ ಹೆಸರು** | ಃ | **ಗಿರೀಶ್** |
| **ವಯಸ್ಸು** | ಃ | **44 ವರ್ಷ** |
| **ಉದ್ಯೋಗ** | ಃ | **ಎ.ಎಸ್.ಐ. ಮಹಿಳಾ ಪೊ.ಠಾಣೆ** |
| **ವಾಸ ಸ್ಥಳ** | ಃ | **ರಾಮನಗರ** |

**ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಅಭಿಯೋಜಕರಿಂದಃ**

ಕಳೆದ 4 ವರ್ಷಗಳಿಂದ ನಾನು ರಾಮನಗರದ ಮಹಿಳಾ ಪೊಲೀಸ್ ಠಾಣೆಯಲ್ಲಿ ಎ.ಎಸ್.ಐ. ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

2. ದಿಃ20.04.2022 ರಂದು ನಾನು ಎಸ್.ಹೆಚ್.ಓ. ಕರ್ತವ್ಯದಲ್ಲಿದ್ದಾಗ ಮಧ್ಯಾಹ್ನ 01.00 ಗಂಟೆಗೆ ಪಿರ್ಯಾದುದಾರರಾದ ಶ್ರೀಮತಿ ಸೌಮ್ಯ ಠಾಣೆಗೆ ಒಂದು ಮುದ್ರಿತ ದೂರನ್ನು ನೀಡಿದ್ದು, ಅದನ್ನು ಪಡೆದುಕೊಂಡು ಠಾಣಾ ಮೊ.ಸಂ.52/22 ರಲ್ಲಿ ಕಲಂ.498ಎ, 323, 324, 504, 506, 307 ಐಪಿಸಿ ಮತ್ತು 3 ಮತ್ತು 4 ಡಿ.ಪಿ. ಆ್ಯಕ್ಟ್ ರೀತ್ಯಾ ಕೇಸು ದಾಖಲಿಸಿ ಪ್ರ.ವ.ವ.ಯನ್ನು ಮಾನ್ಯ ನ್ಯಾಯಾಲಯಕ್ಕೆ ಮತ್ತು ನನ್ನ ಹಿರಿಯ ಅಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸಾಕ್ಷಿಯು ನಿಪಿ.4 ದೂರನ್ನು ಗುರುತಿಸಿದ್ದು, ಅದರಲ್ಲಿರುವ ಸಾಕ್ಷಿಯ ರುಜುವನ್ನು ನಿಪಿ.4(ಬಿ) ಎಂದು ಗುರುತಿಸಲಾಯಿತು. ಪ್ರ.ವ.ವ.ಯನ್ನು ಮತ್ತು ಸಾಕ್ಷಿಯ ರುಜುವನ್ನು ನಿಪಿ.16 ಮತ್ತು 16(ಎ) ಎಂದು ಗುರುತಿಸಲಾಯಿತು. ಕೇಸಿನ ಮುಂದಿನ ತನಿಖೆಗಾಗಿ ಕಡತವನ್ನು ಇನ್ಸಪೆಕ್ಟರ್ ಶೋಭ ರವರಿಗೆ ಕೊಟ್ಟಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ.ವಿ.ಕೆ., ವಕೀಲರಿಂದಃ**

**3.** ನನ್ನ ಮುಂದೆ ಯಾರು ಖುದ್ದಾಗಿ ಬಂದು ದೂರನ್ನು ಕೊಟ್ಟಿಲ್ಲ ಎಂದರೆ ಸರಿಯಲ್ಲ. ದೂರುದಾರರು ನ್ಯಾಯಾಲಯದ ಮುಂದೆ ಅವರು ಯಾವುದೇ ದೂರನ್ನು ಕೊಟ್ಟಿಲ್ಲವೆಂದು ಒಪ್ಪಿಕೊಂಡಿದ್ದಾರೆ ಎನ್ನುವುದು ನನಗೆ ಗೊತ್ತಿಲ್ಲ. ಯಾವುದೇ ಘಟನೆಯು ನಡೆಯದೇ ಇದ್ದರೂ ನಮ್ಮ ಇಲಾಖೆಯ ಅಂಕಿ ಅಂಶಕೋಸ್ಕರ ಸುಳ್ಳು ಕೇಸನ್ನು ದಾಖಲು ಮಾಡಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).**

**ಓ.ಹೇ.ಕೇ.ಸರಿ ಇದೆ ಎಂದು ಸಾಕ್ಷಿ ಒಪ್ಪಿದ್ದಾರೆ.**

(ಬಿ.ವಿ. ರೇಣುಕ)
**ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,**
**ರಾಮನಗರ.**

(ಈ ಹಂತದಲ್ಲಿ ಸದರಿ ಸಾಕ್ಷಿಯು ಅಭಿಯೋಜನ ಪಕ್ಷದ ಪ್ರಕರಣಕ್ಕೆ ಅನುಗುಣವಾಗಿ ಸಾಕ್ಷ್ಯ ನುಡಿಯುತ್ತಿಲ್ಲವಾದ ಕಾರಣ ಆತನನ್ನು ಪ್ರತಿಕೂಲ ಸಾಕ್ಷಿಯಾಗಿ ಪರಿಗಣಿಸಲು ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದರ ಮೇರೆಗೆ ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅಭಿಯೋಜಕರ ವಾಟೀ ಸವಾಲಿಗೆ ಅನುಮತಿ ನೀಡಲಾಗಿದೆ.)

<u>ವಾಟೀ ಸವಾಲುಃ ಸರ್ಕಾರಿ ಅಭಿಯೋಜಕರಿಂದ ಃ</u>